ರಾಜ್ಯದಲ್ಲಿರುವ ಕನ್ನಡ ಮತ್ತು ಆಂಗ್ಲಮಾಧ್ಯಮ ವಸತಿ ಕಾಲೇಜು

295 : (374)

ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ರಾಜ್ಯದಲ್ಲಿರುವ ಕನ್ನಡ ಮತ್ತು ಆಂಗ್ಲ ಮಾಧ್ಯಮ ವಸತಿ ಶಾಲೆಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು) ಅವುಗಳಲ್ಲಿ ಸಮರ್ಪಕ ಮೂಲ ಸೌಕರ್ಯಗಳನ್ನು ಒದಗಿಸಿಕೊಡಲಾಗಿದೆಯೇ: ಇಲ್ಲವಾದಲ್ಲಿ ಈ ಕುರಿತು ಸರ್ಕಾರದ ಕ್ರಮಗಳೇನು:

ಆ) ಮುಂದಿನ ಶೈಕ್ಷಣಿಕ ಸಾಲಿನಿಂದ ಎಷ್ಟು ನೂತನ ಆಂಗ್ಲ ಮಾಧ್ಯಮ ಶಾಲೆಗಳನ್ನು ಆರಂಭಿಸಲು ಯೋಜಿಸಲಾಗಿದೆ (ವಿವರ ನೀಡುವುದು)

ಇ) ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ಕನ್ನಡ ಕಲಿಕಾ ಸೌಲಭ್ಯ ಕಲ್ಪಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು.? (ವಿವರ ನೀಡುವುದು)

ಶ್ರೀ ಎಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ರಾಜ್ಯದಲ್ಲಿ ಯಾವುದೇ ವಸತಿ ಶಾಲೆಗಳನ್ನು ನಡೆಸಲಾಗುತ್ತಿಲ್ಲ. ಆದರೆ, ಸರ್ವ ಶಿಕ್ಷಣ ಅಭಿಯಾನದಲ್ಲಿ ಹೆಣ್ಣು ಮಕ್ಕಳ ಶಿಕ್ಷಣ ಕಾರ್ಯತಂತ್ರದಡಿ ಹಿಂದುಳಿದ ಬ್ಲಾಕ್‌ಗಳಲ್ಲಿ 71 ಕಸ್ತೂರ ಬಾ ಗಾಂಧಿ ಬಾಲಿಕ ವಸತಿ ಶಾಲೆಗಳನ್ನು ಹೆಣ್ಣು ಮಕ್ಕಳಿಗಾಗಿ ತೆರೆಯಲಾಗಿದೆ (ಕನ್ನಡ ಮಾಧ್ಯಮ ವಸತಿ ಶಾಲೆಗಳು) ಅದರಲ್ಲಿ ಸರ್ವ ಶಿಕ್ಷಣ ಅಭಿಯಾನದಿಂದ 39 ಕೆ.ಜಿ.ಬಿ.ವಿ. ವಸತಿ ಶಾಲೆಗಳನ್ನು ಹಾಗೂ ಮಹಿಳಾ ಸಾಮಾನ್ಯ ವತಿಯಿಂದ 32 ಕೆ.ಜಿ.ಬಿ.ವಿ. ವಸತಿ ಶಾಲೆಗಳನ್ನು ನಡೆಸಲಾಗುತ್ತದೆ. ಎಲ್ಲಾ 71 ವಸತಿ ಶಾಲೆಗಳಲ್ಲಿ ಮೂಲಸೌಕರ್ಯಗಳನ್ನು ಒದಗಿಸಿಕೊಡಲಾಗಿದೆ.

ಆ) ಯಾವುದೇ ಆಂಗ್ಲ ಮಾಧ್ಯಮ ವಸತಿ ಶಾಲೆಗಳನ್ನು ಪ್ರಾರಂಭಿಸಲು ಯೋಜಿಸಿರುವುದಿಲ್ಲ.

ಇ) ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ಕನ್ನಡವನ್ನು ಒಂದು ಭಾಷೆಯನ್ನಾಗಿ ಕಲಿಸಲಾಗುತ್ತಿದೆ.